ಒ. ಎಸ್. ನಂ.321 /2014

ಪಿಡಬ್ಲೂ-1

ದಿನಾಂಕಃ 09.09.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.

**ಪಾಟೀ ಸವಾಲು :- ಶ್ರೀ. ಪ್ರತಿವಾದಿ ಪರ ವಕೀಲರಿಂದಃ-**

ನಿಪಿ 22 ರಂತೆ ಕರೀಗೌಡ ಬಿನ್ ಕರೀಗೌಡ ಅಕ್ರಮವಾಗಿ ಸರ್ವೆ ನಂಬರ್ 5 ರಲ್ಲಿ ಅಕ್ರಮವಾಗಿ ಖಾತೆ ಮಾಡಿಸಿಕೊಂಡಿರುತ್ತಾರೆ ಎಂದು ಪ್ರತಿವಾದಿ ಅರ್ಜಿ ಕೊಟ್ಟಿರುತ್ತಾರೆ ಎಂದರೆ ಸರಿ. ನಾನು ಅಕ್ರಮವಾಗಿ ಖಾತೆ ಮಾಡಿಸಿಕೊಂಡಿದ್ದಕ್ಕೆ ಪ್ರತಿವಾದಿ ಅರ್ಜಿ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಮಲ್ಲಳ್ಳಿ ಗ್ರಾಮದ ಸರ್ವೆ ನಂಬರ್ 5 ರಲ್ಲಿ 3 ಎಕರೆ ನಾನು ಸ್ವಾಧೀನ ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಚಕ್ಕುಬಂಧಿಯನ್ನು ರುಜುವಾತು ಪಡಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಾವಾ ಸ್ವತ್ತಿನ ಚಕ್ಕುಬಂಧಿ ಇದೇ ಎಂದು ತೋರಿಸಲು ನಾಕಶೆಯನ್ನು ಹಾಜರುಪಡಿಸಿರುತ್ತೇನೆ. ನಿಪಿ **22** ರಿಂದ **25** ದಾಖಲೆಗಳನ್ನು ದಾವೆ ಗೋಸ್ಕರ ಸೃಷ್ಟಿ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ಅಸ್ತಿತ್ವದಲ್ಲಿಲ್ಲ ಮತ್ತು ನಾನು ದಾವಾ ಸ್ವತ್ತಿನಲ್ಲಿ ಸ್ವಾಧೀನ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ